ದಿನಾಂಕ: **25.03.2022** ರಂದು **11-00** ಗಂಟೆಗೆ ಡಾ. ಸುರೇಶ್. ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-**179** (ಶಾಖಾಂಬರಿನಗರ) ನಡೆದ ಸಭೆಯ ನಡಾವಳಿಗಳು:

: ಚರ್ಚೆಯಾದ ವಿಷಯಗಳು :

1. **ವಾರ್ಡ್-179ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ರಸ್ತೆ ಕಾಮಗಾರಿಗಳ ಬಗ್ಗೆ ಚರ್ಚಿಸುವ ಕುರಿತು.**
2. **ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.**

: ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| ಅಧ್ಯಕ್ಷರು | **ನೋಡಲ್ ಅಧಿಕಾರಿ** |
| ಸದಸ್ಯ ಕಾರ್ಯದರ್ಶಿ | **ವಾರ್ಡ್ 179ರ ಸಹಾಯಕ ಅಭಿಯಂತರರು** |
| ಸದಸ್ಯರುಗಳು | **ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು** |
| ಸದಸ್ಯರುಗಳು | **ಜೆ.ಪಿ.ನಗರ ಬೆಸ್ಕಾಂ ಅಭಿಯಂತರರು** |
| ಸದಸ್ಯರುಗಳು | **ಬಿಡಬ್ಲ್ಯೂಎಸ್‌ಎಸ್‌ಬಿ ಅಭಿಯಂತರರು** |
| ಸದಸ್ಯರುಗಳು | **ಅರಣ್ಯ ಸಂರಕ್ಷಣಾಧಿಕಾರಿಗಳು** |
| ಸದಸ್ಯರುಗಳು | **ಬೀದಿ ದೀಪ ನಿರ್ವಹಣಾ ಅಭಿಯಂತರರು** |
| ಸದಸ್ಯರುಗಳು | **ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು** |
| ಸದಸ್ಯರುಗಳು | **ರಸ್ತೆ ಮೂಲಭೂತ ಸೌಕರ್ಯ (ದಕ್ಷಿಣ)** |
| ಸದಸ್ಯರುಗಳು | **ಯೋಜನೆ (ದಕ್ಷಿಣ)** |
| ಸದಸ್ಯರುಗಳು | **ಠಾಣಾಧಿಕಾರಿಗಳು, ನ್ಯಾಯ ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ** |
| ಸದಸ್ಯರುಗಳು | **ಬೃಹತ್ ನೀರುಗಾಲುವೆ ಅಭಿಯಂತರರು** |
| ಸದಸ್ಯರುಗಳು | **ತೋಟಗಾರಿಕಾ ಅಧೀಕ್ಷಕರು (ದಕ್ಷಿಣ)** |
| ಸದಸ್ಯರುಗಳು | **ನಾಗರೀಕ ಕಲ್ಯಾಣ ಸಂಘ** |

:ನಡಾವಳಿಯ ವರದಿ:

- **ಸದಸ್ಯ ಕಾರ್ಯದರ್ಶಿಗಳಾದ ಶ್ರೀಮತಿ ಅನುಷಾ .ಎ.ಎಂ. ಸಹಾಯಕ ಇಂಜಿನಿಯರ್ ವಾರ್ಡ್ 179 ಶಾಖಾಂಬರಿನಗರ, ಜೆ.ಪಿ.ನಗರ ಉಪವಿಭಾಗ ರವರು ಮಾತನಾಡುತ್ತಾ ಸಭೆಗೆ ಹಾಜರಾದ ವಾರ್ಡ್ ಸಮಿತಿಯ ಮಾನ್ಯ ಅಧ್ಯಕ್ಷರು, ಸದಸ್ಯರು ಹಾಗೂ ಪಾಲಿಕೆಯ ಮತ್ತು ಎಲ್ಲಾ ಇಲಾಖೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.**

ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.

- ವಾರ್ಡ್ ಸಂಖ್ಯೆ 179 ಶಾಖಾಂಬರಿನಗರ 46ನೇ ಅಡ್ಡರಸ್ತೆ, ಜಯನಗರ ಇಲ್ಲಿ ಬೀದಿ ದೀಪಗಳು ದುರಸ್ಥಿಗೊಂಡಿದ್ದು, ಸರಿಪಡಿಸುವಂತೆ ಸಂಬಂಧಪಟ್ಟ ಅಧಿಕಾರಿಗೆ ಸೂಚಿಸುವಂತೆ ಚರ್ಚಿಸಲಾಯಿತು.

- ಜೈನ್ ಪ್ರಕೃತಿ ಹತ್ತಿರದ ಗೇಟಿನ ಮುಂಭಾಗದ ಪಾದಚಾರಿ ರಸ್ತೆಯನ್ನು ಸರಿಪಡಿಸಲು ರೋಡ್ ಇನ್‌ಫ್ರಾ (ದಕ್ಷಿಣ) ರವರಿಗೆ ಸೂಚಿಸುವಂತೆ ಕೋರಲಾಯಿತು.

- ಶಾಖಾಂಬರಿನಗರ ವ್ಯಾಪ್ತಿಯ 40ನೇ ಅಡ್ಡರಸ್ತೆ, 1ನೇ ಮುಖ್ಯರಸ್ತೆಯಲ್ಲಿನ ರಸ್ತೆಗಳು ಗುಂಡಿ ಬಿದ್ದಿದ್ದು, ಸದರಿ ಗುಂಡಿಗಳು ಮುಚ್ಚಲು ಕ್ರಮ ಕೈಗೊಳ್ಳುವ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಮತ್ತು ವಾರ್ಡ್ ಸಂಖ್ಯೆ 179 ಶಾಖಾಂಬರಿನಗರ ವ್ಯಾಪ್ತಿಯಲ್ಲಿರುವ ರಸ್ತೆಗಳನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ವತಿಯಿಂದ ಒಳಚರಂಡಿಗಾಗಿ ರಸ್ತೆ ಅಗೆತ ಮಾಡಿದ್ದು ಇದರಿಂದ ಸಾರ್ವಜನಿಕರಿಗೆ ಮತ್ತು ವಾಹನ ಸಂಚಾರಕ್ಕೆ ತುಂಬಾ ತೊಂದರತೆಯಾಗುತ್ತಿದ್ದು ಸದರಿ ಅಗೆದಿರುವ ಭಾಗವನ್ನು ಮುಚ್ಚಲು ತುರ್ತಾಗಿ ಕಾಮಗಾರಿಯನ್ನು ಕೈಗೂಳ್ಳುವಂತೆ ಸಭೆಯಲ್ಲಿ ಕೋರಲಾಯಿತು.

- 39ನೇ ಅಡ್ಡರಸ್ತೆ, 8ನೇ ಬಡಾವಣೆ ಜಯನಗರ, ಸಹಸ್ರ ಹಾಸ್ಪಿಟಲ್ ಹತ್ತಿರ ಮರದ ರೆಂಬೆ-ಕೊಂಬೆಗಳನ್ನು ಕತ್ತರಿಸುವಂತೆ ಅರಣ್ಯ ಇಲಾಖೆರವರಿಗೆ ಸೂಚಿಸುವಂತೆ ಚರ್ಚಿಸಲಾಯಿತು.

- 46ನೇ ಅಡ್ಡರಸ್ತೆಯಲ್ಲಿ ಕಸ ಗುಡಿಸುವವರು ಇಲ್ಲದ ಕಾರಣ, ಸಂಬಂಧಪಟ್ಟ ಇಲಾಖೆಯಿಂದ ಪೌರಕಾರ್ಮಿಕರನ್ನು ಒದಗಿಸುವಂತೆ ಕೋರಲಾಯಿತು.

- ವಾರ್ಡ್ ಸಂಖ್ಯೆ 179 ವ್ಯಾಪ್ತಿಯಲ್ಲಿ ಬಿ.ಬಿ.ಎಂ.ಪಿ ಇಲಾಖೆ ವತಿಯಿಂದ ಹೊಸ ಕೊಳವೆ ಬಾವಿಗಳು (Bore well) ಕೊರೆಯಲು ಹಾಗೂ ಈಗಾಗಲೇ ಕೊರೆದಿರುವ ಕೊಳವೆ ಬಾವಿಗಳು ಹಾಳಾಗಿದ್ದು ನೀರಿನ ಅಭಾವ ಉಂಟಾಗಿರುತ್ತದೆ. ಕೊಡಲೇ ಈ ಸಮಸ್ಯೆ ಬಗೆಹರಿಸಲು ಸಭೆಯಲ್ಲಿ ಕೋರಲಾಯಿತು.

- ನೋಡಲ್ ಅಧಿಕಾರಿಗಳು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿರುವ ಫುಟ್‌ಪಾತ್ ಅಭಿವೃದ್ಧಿ ಕಾಮಗಾರಿಗೆ ಸಂಬಂಧಿಸಿದಂತೆ ವಾರ್ಡ್ ವ್ಯಾಪ್ತಿಯಲ್ಲಿ ಪರಿವೀಕ್ಷಣೆ ಮಾಡಿ ತುರ್ತಾಗಿ ಕೈಗೊಳ್ಳಬೇಕಾಗುವ ಫುಟ್‌ಪಾತ್ ಅಭಿವೃದ್ಧಿ ಕಾಮಗಾರಿಯನ್ನು ಶೀಘ್ರವಾಗಿ ಕಾಮಗಾರಿ ಕೈಗೊಳ್ಳುವಂತೆ ಸಭೆಯಲ್ಲಿ ತಿಳಿಸಿದರು.

ನೋಡಲ್ ಅಧಿಕಾರಿಗಳು ಮಾತನಾಡಿ ಮಾನ್ಯ ವಲಯ ಆಯುಕ್ತರು (ದಕ್ಷಿಣ) ರವರ ಆದೇಶದಂತೆ 2021–22 ನೇ ಸಾಲಿನ ಕಾಮಗಾರಿಗಳ ಕ್ರಿಯಾಯೋಜನೆ ಪಟ್ಟಿಗಳಿಗೆ ಅನುಮೋದನೆ ನೀಡಿರುವಂತೆ ಸಾರ್ವಜನಿಕ ಹಿತದೃಷ್ಟಿಯಿಂದ ಈ ಕೆಳಕಂಡ ಕಾಮಗಾರಿಗಳನ್ನು ವಾರ್ಡ್ ಕಮಿಟಿ ಸಭೆಯಲ್ಲಿ ಉಪಸ್ಥಿತರಿರುವ ಎಲ್ಲರರೊಂದಿಗೆ ಚರ್ಚಿಸಿ ಅನುಮತಿಯನ್ನು ಪಡೆಯಲಾಯಿತು.

<u>ಕಾಮಗಾರಿಗಳ ವಿವರ</u>

| Sl No | Name of Work | Estimate cost (in Lakhs) |
|---|---|---|
| | **P-3726** | |
| 1 | Filling up of Potholes in ward jurisdiction in ward no 179 | 20.00 |
| 2 | Maintenance of footpath , drains & Re-asphalting of damaged roads in ward Jurisdiction in ward no 179 | 20.00 |
| | **P-1802** | |
| 3 | Annual maintenance of water supply pipe line and Borewell in ward Jurisdiction in ward no 179 | 20.00 |
| | **Total Amount in Lakhs** | **60.00** |

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಬೆಳಿಗ್ಗೆ 11.00 ಘಂಟೆಗೆ ಇದೇ ರೀತಿಯಾಗಿ ಮಾಸಿಕ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, (ಜೆ.ಪಿ.ನಗರ) ಉಪವಿಭಾಗದ ಶ್ರೀಮತಿ ಅನುಷಾ .ಎ.ಎಂ. ಸಹಾಯಕ ಇಂಜಿನಿಯರ್ ವಾರ್ಡ್ 179 ಶಾಖಾಂಬರಿನಗರ, ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು ವಾರ್ಡ್ **179**
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ